## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2017-18ನೇ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸುಗಳನ್ನೊಳಗೊಂಡಂತೆ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಶುಲ್ಕ ನಿಗಧಿಗೊಳಿಸುವ/ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂ. ಕಾಶಿಇ/ಶೈವಿ/ 05/ ಸ್ನಾ.ಪ. ಶುಲ್ಕ/2017-18, ದಿನಾಂಕ 17-04-2017

ಪ್ರಸ್ತಾವನೆ:-

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು ಇವರು 2017-18ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪದವಿ ಕಾಲೇಜುಗಳಲ್ಲಿ ನಡೆಯುತ್ತಿರುವ ಸ್ನಾತಕೋತ್ತರ ಪದವಿ ಕೋರ್ಸುಗಳ ಶುಲ್ಕವನ್ನು ಪರಿಷ್ಕರಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಇಡಿ 279 ಯುಎನ್‌ಇ 2017, ಬೆಂಗಳೂರು, ದಿನಾಂಕ: 31-07-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿಗೆ ಕೆಲವು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾರಂಭಿಸಲಾಗಿರುವ ಎಂ.ಬಿ.ಎ ಮತ್ತು ಎಂ.ಸಿ.ಎ ಕೋರ್ಸುಗಳನ್ನೊಳಗೊಂಡಂತೆ ವಿವಿಧ ಸ್ನಾತಕೋತ್ತರ ಕೋರ್ಸುಗಳಿಗೆ ಈ ಕೆಳಕಂಡಂತೆ ಶುಲ್ಕ ನಿಗಧಿಗೊಳಿಸಿ ಆದೇಶಿಸಲಾಗಿದೆ.

1. **ಸ್ನಾತಕೋತ್ತರ ಕೋರ್ಸುಗಳ ಶುಲ್ಕದ ವಿವರ:- (ಎಂ.ಬಿ.ಎ., ಹೊರತುಪಡಿಸಿ)**

| ಕ್ರ.ಸಂ. | ವಿವರ | 2017-18ನೇ ಸಾಲಿಗೆ ನಿಗಧಿಪಡಿಸಬೇಕಾಗಿರುವ ಶುಲ್ಕ |
|---|---|---|
| 1 | ಅರ್ಜಿ ಶುಲ್ಕ | 50-00 |
| 2 | ಪ್ರವೇಶ ಶುಲ್ಕ | 100-00 |
| 3 | ಪಾಠ ಶುಲ್ಕ | 1000-00 |
| 4 | ಪ್ರಯೋಗಾಲಯ ಶುಲ್ಕ | 300-00 |
| 5 | ವೈದ್ಯಕೀಯ ತಪಾಸಣಾ ಶುಲ್ಕ | 30-00 |
| 6 | ವರ್ಗಾವಣೆ ಶುಲ್ಕ | 50-00 |
| 7 | ವಿದ್ಯಾಭ್ಯಾಸ ಪ್ರಮಾಣ ಪತ್ರ | 20-00 |
| 8 | ವಾಚನಾಲಯ ಶುಲ್ಕ | 100-00 |
| 9 | ಕ್ರೀಡಾ ಶುಲ್ಕ | 100-00 |
| 10 | ಗ್ರಂಥಾಲಯ ಶುಲ್ಕ (ಬೈಂಡಿಂಗ್ ಸೇರಿ) | 100-00 |
| 11 | ಸ್ನಾತಕೋತ್ತರ ವಿಭಾಗ ಅಭಿವೃದ್ಧಿ ಶುಲ್ಕ | 1000-00 |
| 12 | ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ನಿಧಿ | (ಸಾರ್ವಜನಿಕ ಶಿಕ್ಷಣ ಇಲಾಖೆಯು ಶುಲ್ಕ ನಿಗಧಿಪಡಿಸಿದಂತೆ) |
| 13 | ಅಧ್ಯಾಪಕರ ಸಹಾಯ ನಿಧಿ | |
| 14 | ಪ್ರವೇಶ ಶುಲ್ಕ | ಆಯಾ ವಿಶ್ವವಿದ್ಯಾಲಯಗಳು ಶುಲ್ಕ ನಿಗಧಿಪಡಿಸಿದಂತೆ |
| 15 | ನೋಂದಣಿ ಶುಲ್ಕ | |
| 16 | ಪರೀಕ್ಷಾ ಶುಲ್ಕ | |
| 17 | ಇನ್ನಿತರೆ ವಿಶ್ವವಿದ್ಯಾಲಯ ಶುಲ್ಕ | |

....2

2. ಎಂ.ಬಿ.ಎ. ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ಸಾಮಾನ್ಯ ವಿದ್ಯಾರ್ಥಿಗಳಿಗೆ ಸರ್ಕಾರವು ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ ನಿಗದಿಪಡಿಸಲಾಗಿದ್ದ ವಾರ್ಷಿಕ ರೂ. 20,000/-ಗಳ ಶುಲ್ಕವನ್ನೇ 2017-18ನೇ ಶೈಕ್ಷಣಿಕ ಸಾಲಿಗೆ ನಿಗದಿಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ವೀರಬ್ರಹ್ಮಚಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು)

ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/05/ಸ್ನಾ.ಪ.ಶುಲ್ಕ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

**ಪರಿಚಲನಾದೇಶ**

ಸರ್ಕಾರದ ಈ ಆದೇಶವನ್ನು ಕೆಳಕಂಡವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

**ಇವರಿಗೆ,**

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ
3) ಲೆಕ್ಕಾಧಿಕಾರಿಗಳು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4) ಮಾಹಿತಿ & ತಂತ್ರಜ್ಞಾನ ಅಧಿಕಾರಿಗಳು, ಕಾ.ಶಿ.ಆ. ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
5) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳಿಗೆ.
6) ಕಛೇರಿ ಪ್ರತಿ